ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು-560001.

ಸಂಖ್ಯೆ: ಕಾಶಿಇ/ಶೈವಿ/157/ರಾ.ಮ.ದಿನ/2020-21 ದಿನಾಂಕ: 27.12.2022.

**ಸುತ್ತೋಲೆ**

ವಿಷಯ: ರಾಷ್ಟ್ರೀಯ ಮತದಾರರ ದಿನಾಚರಣೆ (National Voters Day) ಪ್ರಯುಕ್ತ ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆಗಳನ್ನು (ಕನ್ನಡ ಮತ್ತು ಆಂಗ್ಲ ಭಾಷೆ ಪ್ರತ್ಯೇಕವಾಗಿ) ಹಾಗೂ ಭಿತ್ತಿ ಚಿತ್ರ ಸ್ಪರ್ಧೆ ಆಯೋಜಿಸುವ ಕುರಿತು.

ಉಲ್ಲೇಖ: 1. ಮುಖ್ಯ ಚುನಾವಣಾಧಿಕಾರಿಯವರ ಕಛೇರಿಯ ಸುತ್ತೋಲೆ ಸಂಖ್ಯೆ:ಸಿಆಸುಇ/20/SVEEP/2022 dt:23.12.2022

*******

ರಾಷ್ಟ್ರೀಯ ಮತದಾರರ ದಿನಾಚರಣೆ (National Voters' Day) ಸಂಬಂಧ, ರಾಜ್ಯದ ಎಲ್ಲಾ ಪದವಿ ಕಾಲೇಜುಗಳಲ್ಲಿ ಕಾಲೇಜು, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಸ್ಪರ್ಧೆಗಳನ್ನು ನಡೆಸಿರುವುದು ಸರಿಯಷ್ಟೆ, ಪ್ರಸ್ತುತ ರಾಜ್ಯ ಮಟ್ಟದ ಸ್ಪರ್ಧಾ ಚಟುವಟಿಕೆಗಳಾದ ಪ್ರಬಂಧ ಸ್ಪರ್ಧೆ (ಕನ್ನಡ ಮತ್ತು ಆಂಗ್ಲ ಭಾಷೆ ಪ್ರತ್ಯೇಕವಾಗಿ) ಹಾಗೂ ಭಿತ್ತಿ ಚಿತ್ರ ಸ್ಪರ್ಧೆ ನಡೆಸಲು ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಿಂದ ರಾಜ್ಯ ಮಟ್ಟದ ಸ್ಪರ್ಧೆಯನ್ನು ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆಯಲ್ಲಿ ಜಿಲ್ಲಾ ಕೇಂದ್ರಗಳಲ್ಲಿ ವಿಡಿಯೋ ಕಾನ್ಫರೆನ್ಸ್ ಮುಖಾಂತರ ಆಯೋಜಿಸುವಂತೆ ಉಲ್ಲೇಖಿತ (2)ರ ಪತ್ರದಲ್ಲಿ ಸೂಚಿಸಲಾಗಿದೆ.

ಸದರಿ ಸ್ಪರ್ಧೆಗೆ ಮೇಲ್ವಿಚಾರಕಾಗಿ ಜಿಲ್ಲಾ ಲೀಡ್ ಕಾಲೇಜಿನ ಪ್ರಾಂಶುಪಾಲರುಗಳನ್ನು ನಿಯೋಜಿಸಲಾಗಿದೆ. ಈ ಸ್ಪರ್ಧೆಗಳನ್ನು ದಿನಾಂಕ:30.12.2022 ರಂದು ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 01.30 ಗಂಟೆಯವರೆಗೆ ಜಿಲ್ಲಾ ಪಂಚಾಯಿತಿಯ ಕಛೇರಿ K-SWAN (Video Conference ID-100100)ನ ಮುಖೇನ ವಿಡಿಯೋ ಕಾನ್ಫರೆನ್ಸ್ ಸಭಾಂಗಣದಲ್ಲಿ ಸ್ಪರ್ಧೆಗಳನ್ನು ಆಯೋಜಿಸುವುದು. ಪ್ರಬಂಧ ಭಿತ್ತಿ ಚಿತ್ರ ಸ್ಪರ್ಧೆಗಳನ್ನು ಕೋವಿಡ್-19ರ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಿ ನಡೆಸುವುದು. ಪ್ರತಿ ಜಿಲ್ಲಾ ಕೇಂದ್ರದಿಂದ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಹಾಗೂ ಜಿಲ್ಲಾ SVEEP ನೋಡಲ್ ಅಧಿಕಾರಿಗಳ ನೇತೃತ್ವದಲ್ಲಿ ಕನ್ನಡ ಪ್ರಬಂಧ ಸ್ಪರ್ಧೆಗೆ ಮೂರು ವಿದ್ಯಾರ್ಥಿಗಳು, ಇಂಗ್ಲೀಷ್ ಪ್ರಬಂಧ ಸ್ಪರ್ಧೆಗೆ ಮೂರು ವಿದ್ಯಾರ್ಥಿಗಳು ಮತ್ತು ಭಿತ್ತಿ ಚಿತ್ರ ಸ್ಪರ್ಧೆಗೆ ಮೂರು ವಿದ್ಯಾರ್ಥಿಗಳು ಹಾಗೂ ಮೂರು ಮೇಲ್ವಿಚಾರಕರು ಮಾತ್ರ ಹಾಜರಾಗತಕ್ಕದ್ದು.

..2.,

ಸ್ಪರ್ಧೆಗಳು ಮುಗಿದ ತಕ್ಷಣವೇ ಉತ್ತರ ಪತ್ರಿಕೆಗಳನ್ನು ಸ್ಕ್ಯಾನ್ ಮಾಡಿ ಪಿಡಿಎಫ್ ನಲ್ಲಿ consveep@gmail.com ಗೆ ಕಳುಹಿಸುವುದಲ್ಲದೇ ಹಾರ್ಡ್ ಪ್ರತಿಗಳನ್ನು ಅಂದೇ ಈ ಕೆಳಗಿನ ವಿಳಾಸಕ್ಕೆ ಕಳುಹಿಸುವುದು. ಸದರಿ ಪತ್ರಿಕೆಗಳನ್ನು ಮೌಲ್ಯಮಾಪನ ಮಾಡಿ, ವಿಜೇತರಿಗೆ ರಾಷ್ಟ್ರೀಯ ಮತದಾರ ದಿನಾಚರಣೆಯಂದು ಪ್ರಶಸ್ತಿ ನೀಡಲಾಗುವುದು.

ಉತ್ತರ ಪತ್ರಿಕೆಗಳ ಹಾರ್ಡ್ ಪ್ರತಿಗಳನ್ನು ಸಲ್ಲಿಸುವ ವಿಳಾಸ:

**ಶ್ರೀ ಪಿ. ಎಸ್. ವಸ್ತ್ರದ್, ಭಾಆಸೇ (ನಿ), ರಾಜ್ಯ ನೋಡಲ್ ಅಧಿಕಾರಿಗಳು (SVEEP),**
**ಅಪರ ಮುಖ್ಯ ಚುನಾವಣಾಧಿಕಾರಿಗಳ ಕಛೇರಿ, 2ನೇ ಮಹಡಿ, ಪೂರ್ವದ್ವಾರ, ಖನಿಜ ಭವನ,**
**ರೇಸ್ ಕೋರ್ಸ್ ರಸ್ತೆ, ಬೆಂಗಳೂರು – 560 001.**

ರಾಜ್ಯ ಮಟ್ಟದ ಪ್ರಬಂಧ ಸ್ಪರ್ಧೆಯ ವಿಷಯಗಳು

| ಕ್ರ.ಸಂ | ವಿಭಾಗ | ಕನ್ನಡ ಭಾಷೆಯ ವಿಷಯ | ಆಂಗ್ಲ ಭಾಷೆಯ ವಿಷಯ |
|---|---|---|---|
| 01 | ಪ್ರೌಢ ಶಾಲೆ | ಚುನಾವಣಾ ಪ್ರಕ್ರಿಯೆಯಲ್ಲಿ ಮತದಾರರ ಸಾಕ್ಷರತಾ ಸಂಘಗಳ ಪಾತ್ರ. | Role of Electoral Literacy Clubs in election process |
| 02 | ಪದವಿ ಪೂರ್ವ /ಪಾಲಿಟೆಕ್ನಿಕ್/ತತ್ಸಮಾನ | ಚುನಾವಣಾ ಪ್ರಕ್ರಿಯೆಯಲ್ಲಿ ವೋಟರ್ ಹೆಲ್ಪ್ ಲೈನ್ ಅಪ್ಲಿಕೇಷನ್ ಯಾವ ರೀತಿ ಸಹಕಾರಿ. | How Voter Helpline App is helpful in election process |
| 03 | ಪದವಿ/ತಾಂತ್ರಿಕ/ವೈದ್ಯಕೀಯ ಕಾಲೇಜು/ಸ್ನಾತಕೋತ್ತರ ಕೇಂದ್ರ | ಚುನಾವಣಾ ಪ್ರಕ್ರಿಯೆಯಲ್ಲಿ ತಂತ್ರಜ್ಞಾನದ ಪಾತ್ರ. | The role of technology in the electoral process |

ರಾಜ್ಯ ಮಟ್ಟದ ಭಿತ್ತಿಚಿತ್ರ ಸ್ಪರ್ಧೆಯ ವಿಷಯಗಳು

| ಕ್ರ.ಸಂ | ವಿಭಾಗ | ಕನ್ನಡ ಭಾಷೆಯ ವಿಷಯ | ಆಂಗ್ಲ ಭಾಷೆಯ ವಿಷಯ |
|---|---|---|---|
| 01 | ಪ್ರೌಢ ಶಾಲೆ | ಮತದಾನ ಕೇಂದ್ರದಲ್ಲಿ ಲಭ್ಯವಿರುವ ಸೌಲಭ್ಯಗಳು. | Facilities available at polling station |
| 02 | ಪದವಿ ಪೂರ್ವ /ಪಾಲಿಟೆಕ್ನಿಕ್/ತತ್ಸಮಾನ | ಮಾದರಿ ಮತದಾನ ಕೇಂದ್ರ | Model Polling Station |
| 03 | ಪದವಿ/ತಾಂತ್ರಿಕ/ವೈದ್ಯಕೀಯ ಕಾಲೇಜು/ಸ್ನಾತಕೋತ್ತರ ಕೇಂದ್ರ | ಮುಕ್ತ ನ್ಯಾಯಯುತ ಚುನಾವಣೆಗಾಗಿ ನೀತಿ ಸಂಹಿತೆಯ ಪಾತ್ರ | Role about code of conduct for free fare election |

ಕಾಲೇಜು ಶಿಕ್ಷಣ ನಿರ್ದೇಶಕರು

..3.,

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ಮುಖ್ಯ ಚುನಾವಣಾಧಿಕಾರಿಗಳು, ಮುಖ್ಯಚುನಾವಣಾಧಿಕಾರಿಯವರ ಕಛೇರಿ, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು-560 001.
2. ಕಛೇರಿ ಪ್ರತಿ.